**<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ರವರ ನ್ಯಾಯಾಲಯ, ನಂಜನಗೂಡು</u>**

**<u>ಸಿಸಿ ಸಂಖ್ಯೆ: 814/2024</u>**

**ಫಿರ್ಯಾದುದಾರರು** : ಸರ್ಕಾರದ ಪರವಾಗಿ ಆರಕ್ಷಕ ಉಪ-ನಿರೀಕ್ಷಕರು,
ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆ,
ನಂಜನಗೂಡು.

ವಿರುದ್ಧ

**ಆರೋಪಿಗಳು** : ಶ್ರೀ.ಪ್ರೇಮಕುಮಾರ್ ಕೆ ಎನ್ ಮತ್ತು ಇತರರು

**:: <u>ದೋಷಾರೋಪಣೆ</u> ::**

**ಶ್ರೀ ಸತೀಶ ಕೆ.ಜಿ., ಬಿ.ಎ., ಎಲ್.ಎಲ್.ಬಿ.,** ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ನಂಜನಗೂಡು ಆದ ನಾನು ಆರೋಪಿಗಳಾದ-

1) ಶ್ರೀ.ಪ್ರೇಮಕುಮಾರ ಕೆ ಎನ್ ಬಿನ್ ನಿಂಗಯ್ಯ
   ವಯಸ್ಸು ಸುಮಾರು 25 ವರ್ಷ,
2) ಶ್ರೀ.ಮಧು ಕೆ ಎಂ ಬಿನ್ ಮಹದೇವಯ್ಯ
   ವಯಸ್ಸು ಸುಮಾರು 25 ವರ್ಷ,
3) ಶ್ರೀ.ಸಂತೋಷ ಕುಮಾರ ಎಂ
   ಬಿನ್ ಮಹದೇವಯ್ಯ,
   ವಯಸ್ಸು ಸುಮಾರು 26 ವರ್ಷ,
4) ಶ್ರೀ.ನಿಂಗಯ್ಯ ಬಿನ್ ಲೇಟ್ ಮಾದಯ್ಯ
   ವಯಸ್ಸು ಸುಮಾರು 48 ವರ್ಷ,
5) ಶ್ರೀ.ನವೀನ್ ಕುಮಾರ ಬಿನ್ ಚಿಕ್ಕತಮ್ಮಯ್ಯ
   ವಯಸ್ಸು ಸುಮಾರು 34 ವರ್ಷ,

ನಂಜನಗೂಡು ತಾಲ್ಲೂಕಿನ ಕಸುವಿನಹಳ್ಳಿ ಗ್ರಾಮದ ನಿವಾಸಿಗಳಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ-

ಮೊದಲನೆಯದಾಗಿ ದಿನಾಂಕ 10.04.2024 ರಂದು ರಾತ್ರಿ 07.30 ಗಂಟೆ

ಸಮಯದಲ್ಲಿ ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಗೆ ಸೇರಿದ ಕಸುವಿನಹಳ್ಳಿ ಗ್ರಾಮದಲ್ಲಿರುವ ಪೂರ್ಣಚಂದ್ರ ಚಿತ್ರಮಂದಿರ ಮುಂಭಾಗ ಕಸುವಿನಹಳ್ಳಿ - ನಂಜನಗೂಡು ಮುಖ್ಯ ಟಾರ್ ರಸ್ತೆಯ ಪಕ್ಕದಲ್ಲಿ 1 ರಿಂದ 3 ಮತ್ತು 5 ನೇ ಆರೋಪಿಗಳಾದ ನೀವು ಕುಡಿಯುತ್ತಾ ಕುಳಿತಿದ್ದು, ಅದೇ ರಸ್ತೆಯಲ್ಲಿ ಬಯಲು ಕಡೆಗೆ ಬೈಕ್ ನಲ್ಲಿ ಹೋಗುತ್ತಿದ್ದ ಚಾಸಾ-1 ಮತ್ತು 2 ರವರ ಹತ್ತಿರ ಹೋಗಿ ಚಾಸಾ-1 ರವರನ್ನು ಉದ್ದೇಶಿಸಿ "ಬೋಳಿಮಗನೆ ಬೈಕ್ ನಿಲ್ಲಿಸು" ಎಂದು ಅವಾಚ್ಯ ಶಬ್ಧಗಳಿಂದ ಬೈದಿದ್ದು, ಆ ಮೂಲಕ ಚಾಸಾ-1 ರವರಿಗೆ ಉದ್ರೇಕವನ್ನುಂಟು ಮಾಡಿದರೆ ಅಂತಹ ಉದ್ರೇಕದಿಂದ ಅವರು ಕುಪಿತರಾಗಿ ಶಾಂತಿಭಂಗವನ್ನುಂಟು ಮಾಡಲೆಂಬ ಅಥವಾ ಯಾವುದೇ ಅಪರಾಧವನ್ನು ಮಾಡಬೇಕೆಂಬ ಉದ್ದೇಶದಿಂದ ಅವರನ್ನು ಅವಮಾನಪಡಿಸಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 504 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಎರಡನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರ ಜೊತೆ ಜಗಳ ತೆಗೆದು ಆರೋಪಿಗಳ ಪೈಕಿ 2 ಮತ್ತು 3 ನೇ ಆರೋಪಿಗಳಾದ ನೀವು ಚಾಸಾ-1 ರವರನ್ನು ತಬ್ಬಿ ಹಿಡಿದುಕೊಂಡು ಒಂದು ಎಲ್ಲೆಯಿಂದಾಚೆಗೆ ಮುಂದೆ ಹೋಗದಂತೆ ಅಕ್ರಮವಾಗಿ ಪ್ರತಿಬಂಧಿಸಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 341 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಮೂರನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 1 ನೇ ಆರೋಪಿಯಾದ ನೀವು ನಿಮ್ಮ ಜೊತೆಯಲ್ಲಿ ತಂದಿದ್ದ ಬಿಯರ್ ಬಾಟಲ್ ನಿಂದ ಚಾಸಾ-1 ರವರ ಎಡ ಕೆನ್ನೆಗೆ ಹಾಗು ಬಲಭಾಗದ ಹೊಟ್ಟೆಗೆ ಸ್ವ-ಇಚ್ಛೆಯಿಂದ ಚುಚ್ಚಿ ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 324 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ನಾಲ್ಕನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 1 ನೇ ಆರೋಪಿಯಾದ ನೀವು ಚಾಸಾ-1 ರವರನ್ನು ಉದ್ದೇಶಿಸಿ "ಈಗಾಗಲೇ 4 ಕೇಸು ಇದೆ ಇನ್ನೊಂದಾದರೂ ಪರವಾಗಿಲ್ಲ, ಇವನನ್ನು ಮುಗಿಸದೆ ಬಿಡಬಾರದು" ಎಂದು ಜೀವಬೆದರಿಕೆ ಹಾಕಿದ್ದು, ಆ ಮೂಲಕ ಚಾಸಾ-1 ರವರು ಹೆದರುವಂತೆ ಮಾಡಿ ಅವರು ಕಾನೂನು ಸಮ್ಮತವಾಗಿ ಮಾಡಬೇಕಾಗಿರುವ ಕೃತ್ಯವನ್ನು ಮಾಡದಂತೆ ಅಥವಾ ಕಾನೂನು ಸಮ್ಮತವಾಗಿ ಮಾಡಬಾರದ ಕೃತ್ಯವನ್ನು ಮಾಡುವಂತೆ ಅಪಾಯದ ಭೀತಿಯನ್ನು ಹುಟ್ಟಿಸಿ ಅಪರಾಧಿಕ ಭಯೋತ್ಪಾದನೆಯನ್ನುಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 506 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಐದನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 4 ನೇ ಆರೋಪಿಯಾದ ನೀವು ಚಾಸಾ-1 ರವರನ್ನು ಗುರಿಯಾಗಿಸಿಕೊಂಡು "ಆಗಿದ್ದಾಗಲಿ ಟ್ರಾಕ್ಟರ್ ಹತ್ತಿಸಿಬಿಡೋ" ಎಂದು 1 ರಿಂದ 3 ಮತ್ತು 5 ನೇ ಆರೋಪಿಗಳಿಗೆ ಅಪರಾಧಿಕ ಕೃತ್ಯವೆಸಗಲು ಕುಮ್ಮಕ್ಕು ನೀಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 114 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 1 ನೇ ಆರೋಪಿಯಾದ ನೀವು ಕೈಯಿಂದ ಜಗಳ ಬಿಡಿಸಲು ಬಂದ ಚಾಸಾ-2 ರವರ ಎಡ ಕುತ್ತಿಗೆ ಹಾಗು ಮೈ-ಕೈಗೆ ಹಲ್ಲೆ ಮಾಡಿ ನೋವುಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 323 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಪ್ರಶ್ನೆ:1- ಈ ಮೇಲೆ ಹೇಳಿದಂತೆ ನಿಮಗೆ ಓದಿ ಹೇಳಿ ವಿವರಿಸಿದ ದೋಷಾರೋಪಣೆಯನ್ನು ಅರ್ಥಮಾಡಿಕೊಂಡಿರುವಿರಾ?

1 ರಿಂದ 5 ನೇ ಆರೋಪಿಗಳ ಉತ್ತರಃ

ಪ್ರಶ್ನೆ:2- ಸದರಿ ಆರೋಪಣೆಗಳನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬೇಕೋ?

1 ರಿಂದ 5 ನೇ ಆರೋಪಿಗಳ ಉತ್ತರಃ

(ಆರೋಪಿಗಳಿಗೆ ತಿಳಿದಿರುವ ಕನ್ನಡ ಭಾಷೆಯಲ್ಲಿ ಈ ದೋಷಾರೋಪಣೆಯನ್ನು ಓದಿ ತಿಳಿಸಿ ಹೇಳಲಾಗಿ ಸದರಿ ಆರೋಪಿಗಳು ಹೇಳಿದ ಉತ್ತರಗಳನ್ನು ಯಥಾವತ್ತಾಗಿ ಬರೆದುಕೊಳ್ಳಲಾಯಿತ್ತೆಂದು ದೃಢೀಕರಿಸಿರುತ್ತೇನೆ.)

ದಿನಾಂಕಃ 26.11.2025.

(ಸತೀಶ. ಕೆ.ಜಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ. ನಂಜನಗೂಡು.